ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	1694
ಮಾನ್ಯ ಸದಸ್ಯರ ಹೆಸರು	ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	23.03.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ:	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 2438 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಿದ್ಯಾರ್ಥಿ ನಿಲಯಗಳಿಗೆ ರಾಜ್ಯವಲಯ ಹಾಗೂ ಜಿಲ್ಲಾವಲಯದಡಿ ಪ್ರತಿ ವರ್ಷ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಅಗತ್ಯ ಮೂಲಭೂತ ಸೌಕರ್ಯಗಳಾದ ತಟ್ಟೆ-ಲೋಟ, ಬೆಡ್‌ಶೀಟ್, ಜಮಖಾನ, ಹಾಸಿಗೆ-ದಿಂಬು, ಸೋಲಾರ್ ಲೈಟ್ಸ್, ವಿದ್ಯುತ್ ಗೀಸರ್/ಸೋಲಾರ್ ವಾಟರ್ ಹೀಟರ್, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ನ್ಯಾಪ್ಕಿನ್ ಬರ್ನಿಂಗ್ ಮಿಷನ್, ಅನಿಲ ಒಲೆ, ವಾಟರ್ ಪ್ಯೂರಿಫೈಯರ್, ಸ್ಟೀ ಕುಕ್ಕಿಂಗ್, ಪಾತ್ರೆ-ಪೀಠೋಪಕರಣ, ಕಂಪ್ಯೂಟರ್ ಮತ್ತು ಯು.ಪಿ.ಎಸ್, ವೆಬ್ ಕ್ಯಾಮೆರಾ, ತಟ್ಟೆ ಸ್ಟ್ಯಾಂಡ್, ಆರ್.ಓ.ಸಿಸ್ಟಂ, ಊಟದ ಟೇಬಲ್ ಹಾಗೂ ಸುರಕ್ಷತೆಯ ದೃಷ್ಟಿಯಿಂದ ಬಾಲಕಿಯರ ಎಲ್ಲಾ ವಿದ್ಯಾರ್ಥಿನಿಲಯಗಳಿಗೆ ಸಿ.ಸಿ.ಕ್ಯಾಮೆರಾ ಅಳವಡಿಸಲಾಗಿರುತ್ತದೆ. ಪ್ರಸ್ತುತ, 1031 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ಹಾಲಿ 623 ವಿದ್ಯಾರ್ಥಿ ನಿಲಯಗಳಿಗೆ ನಿವೇಶನ ಲಭ್ಯವಿದ್ದು, 279 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತವೆ.

ಇ)	ಮೊರಾರ್ಜಿ ದೇಸಾಯಿ ವಸತಿಶಾಲೆಗಳಲ್ಲಿ ಬೋಧಕ / ಬೋಧಕೇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	167 ಹಿಂದುಳಿದ ವರ್ಗಗಳ ವಸತಿ ಶಾಲೆ/ಕಾಲೇಜುಗಳಲ್ಲಿ ಮಂಜೂರಾದ ಬೋಧಕ ಹುದ್ದೆಗಳ ಸಂಖ್ಯೆ 1828 ಮತ್ತು ಖಾಲಿ ಇರುವ ಬೋದಕರ ಹುದ್ದೆಗಳು 736 (ಸಂಘದ ಅಧೀನದ ಪ.ಜಾತಿ, ಪ.ವರ್ಗ ಮತ್ತು ಹಿಂದುಳಿದ ವರ್ಗಗಳ ವಸತಿ ಶಾಲೆಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವ ಹುದ್ದೆಗಳ ಸಂಖ್ಯೆ: 1644). ಬೋಧಕೇತರ ಸಿಬ್ಬಂದಿಗಳು (ಪ್ರ.ದ.ಸ, ಸ್ಟಾಫ್‌ನರ್ಸ್, ನಿಲಯಪಾಲಕರು) ಮಂಜೂರಾದ ಹುದ್ದೆಗಳ ಸಂಖ್ಯೆ 479, ಖಾಲಿ ಇರುವ ಬೋಧಕೇತರ ಹುದ್ದೆಗಳು 332, (ಸಂಘದ ಅಧೀನದ ಪ.ಜಾತಿ, ಪ.ವರ್ಗ ಮತ್ತು ಹಿಂದುಳಿದ ವರ್ಗಗಳ ವಸತಿ ಶಾಲೆಗಳಲ್ಲಿ ಖಾಲಿಯಿರುವ ಬೋಧಕೇತರ ಸಿಬ್ಬಂದಿಗಳ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವ ಹುದ್ದೆಗಳ ಸಂಖ್ಯೆ: 1245). ಗ್ರೂಪ್ ಡಿ ಹುದ್ದೆಗಳ ಸಂಖ್ಯೆ: 1693 (ಹುದ್ದೆಗಳ ಮಂಜೂರಾತಿ ಷರತ್ತಿನಂತೆ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ). ಖಾಲಿ ಇರುವ ಬೋಧಕ/ ಬೋಧಕೇತರ ಸಿಬ್ಬಂದಿಗಳಿಗೆ ಹೊರಸಂಪನ್ಮೂಲದ ಶಿಕ್ಷಕರು ಹಾಗೂ ಅತಿಥಿ ಶಿಕ್ಷಕರುಗಳು ಮತ್ತು ಹೊರಸಂಪನ್ಮೂಲದ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.
ಈ)	ಬಂದಿದ್ದಲ್ಲಿ, ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ?	

ಸಂಖ್ಯೆ:ಹಿಂವಕ 219 ಬಿಎಂಎಸ್ 2020

(ಬಿ. ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ